ⓘ Computer U/s 24/12/22

## ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 719(963) |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 27-12-2022 |
| ಉತ್ತರಿಸುವ ಸಚಿವರು | : | ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಸುಧಾರಿಸಲು ಯಾವ್ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ನಗರಸ್ಥಳೀಯ ಸಂಸ್ಥೆಗಳಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಸುಧಾರಿಸಲು ಸರ್ಕಾರದಿಂದ ಈ ಕೆಳಕಂಡಂತೆ ಅನೇಕ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br>• ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಘನತ್ಯಾಜ್ಯ ನಿರ್ವಹಣೆಯ ಸ್ಥಿತಿಯನ್ನು ವಿಶ್ಲೇಷಿಸಿ ಯೋಜನಾ ವರದಿಗಳನ್ನು ಸಿದ್ದಪಡಿಸಿ, ರಾಜ್ಯ ಮಟ್ಟದ ಉನ್ನತಾಧಿಕಾರಿಗಳ ಸಮಿತಿಯ ಅನುಮೋದನೆಯನ್ನು ಪಡೆಯಲಾಗಿರುತ್ತದೆ. ಅದರ ರೀತ್ಯಾ ತ್ಯಾಜ್ಯ ಸಂಗ್ರಹಣೆ ಹಾಗೂ ಸಾಗಾಣಿಕೆಗೆ ಅಗತ್ಯವಿರುವ ವಾಹನ-ಯಂತ್ರೋಪಕರಣಗಳನ್ನು ಖರೀದಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಹಾಗೂ ತ್ಯಾಜ್ಯ ಸಂಸ್ಕರಣೆಗೆ ಅವಶ್ಯವಿರುವ ವಿಂಡ್‌ರೋ ಪ್ಲಾಟ್‌ಫಾರಂ, ಶೆಡ್‌ಗಳು, ಯಂತ್ರೋಪಕರಣಗಳು, ಸ್ಯಾನಿಟರಿ ನೆಲಭರ್ತಿ ಸೌಲಭ್ಯ ಇತರೆ ಮೂಲಭೂತ ಸೌಕರ್ಯ ಕಲ್ಪಿಸುವ ಕಾರ್ಯ ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತವೆ.<br>• ಘನತ್ಯಾಜ್ಯ ವಸ್ತುಗಳ ಸಂಗ್ರಹಣೆ ಹಾಗೂ ಸಾಗಾಣಿಕೆಗೆ ಅಗತ್ಯವಿರುವ ವಾಹನಗಳನ್ನು ನೇರವಾಗಿ ಜೆಮ್ ಪೋರ್ಟಲ್ (GeM Portal) ಮೂಲಕ ಖರೀದಿ ಮಾಡಲು ಸರ್ಕಾರದಿಂದ ಕೆ.ಟಿ.ಪಿ.ಪಿ ಕಾಯ್ದೆ, ಕಲಂ (4) ರಡಿ ವಿನಾಯಿತಿಯನ್ನು ನೀಡಲಾಗಿರುತ್ತದೆ.<br>• ಘನತ್ಯಾಜ್ಯ ವಸ್ತು ನಿರ್ವಹಣೆ ಯೋಜನೆಯ ತ್ವರಿತ ಅನುಷ್ಠಾನಕ್ಕಾಗಿ ಘನತ್ಯಾಜ್ಯ ವಸ್ತು ನಿರ್ವಹಣೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳಿಗೆ 5 ಕೋಟಿಗಳ ವರೆಗಿನ ಅಂದಾಜುಗಳಿಗೆ ಅನುಮೋದನೆ ನೀಡುವ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ ಮತ್ತು ರೂ. 5 ಕೋಟಿವರೆಗಿನ ಅಂದಾಜುಗಳಿಗೆ ತಾಂತ್ರಿಕ ಮಂಜೂರಾತಿ ನೀಡಲು ಜಿಲ್ಲಾ ತಾಂತ್ರಿಕ ಸಮಿತಿಗಳನ್ನು ರಚಿಸಲಾಗಿರುತ್ತದೆ.<br>• ಘನತ್ಯಾಜ್ಯ ವಸ್ತು ನಿರ್ವಹಣೆಯನ್ನು ಉತ್ತೇಜಿಸಲು/ ಖಾತರಿಗೊಳಿಸಲು ಮಾದರಿ ಘನತ್ಯಾಜ್ಯ ವಸ್ತು ನಿರ್ವಹಣೆ ಬೈಲಾ ಮತ್ತು ರಾಜ್ಯ ನೀತಿಯನ್ನು ಜಾರಿಗೊಳಿಸಲಾಗಿರುತ್ತದೆ. |

| | | |
|---|---|---|
| | | • ಮಾದರಿ ಘನತ್ಯಾಜ್ಯ ವಸ್ತು ನಿರ್ವಹಣೆ ಬೈಲಾನಲ್ಲಿ ವಿವಿಧ ತ್ಯಾಜ್ಯ ಉತ್ಪಾದಕರಿಗೆ ಸೇವಾ ಶುಲ್ಕವನ್ನು ನಿಗಧಿಪಡಿಸಲಾಗಿರುತ್ತದೆ. ಅದರ ರೀತ್ಯಾ ನಗರಸ್ಥಳೀಯ ಸಂಸ್ಥೆಗಳು ಶುಲ್ಕವನ್ನು ಸಂಗ್ರಹಿಸಿ, SWM O&M (ಕಾರ್ಯಾಚರಣೆ ಮತ್ತು ನಿರ್ವಹಣೆ) ಗೆ ಅಗತ್ಯವಿರುವ ಅನುದಾನವನ್ನು ಕ್ರೂಢೀಕರಿಸಬಹುದಾಗಿರುತ್ತದೆ.<br>• ನಗರ ಪ್ರದೇಶಗಳಲ್ಲಿ ಘನತ್ಯಾಜ್ಯ ನಿರ್ವಹಣೆ ನಿಯಮಗಳು, 2016ರ ಅನುಷ್ಠಾನದ ಪ್ರಗತಿ ಪರಿಶೀಲನೆಗೆ ರಾಜ್ಯ ಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ವಿವಿಧ ಸಮಿತಿಗಳನ್ನು ರಚಿಸಿದ್ದು, ನಿಯಮಿತವಾಗಿ ಸಭೆಗಳನ್ನು ನಡೆಸಿ ನಗರ ಸ್ಥಳೀಯ ಸಂಸ್ಥೆಗಳಿಗೆ ಕಾಲಕಾಲಕ್ಕೆ ಅಗತ್ಯ ಸೂಚನೆ ಸಲಹೆಗಳನ್ನು ನೀಡಲಾಗುತ್ತಿದೆ. |
| ಆ | ಲ್ಯಾಂಡ್ ಫಿಲ್ಲಿಂಗ್ ತಾಣಗಳಲ್ಲಿ ವೈಜ್ಞಾನಿಕ ಸಂಸ್ಕರಣಾ ಸೌಲಭ್ಯಗಳ ಕೊರತೆ ಮತ್ತು ನಿಯಮಗಳನ್ನು ಉಲ್ಲಂಘಿಸಿ, ತ್ಯಾಜ್ಯವನ್ನು ಬಹಿರಂಗವಾಗಿ ಎಸೆಯುವ ಮೂಲಕ ಈ ಸ್ಥಳಗಳಲ್ಲಿ ಪರಿಸರ ಮಾಲಿನ್ಯ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ, ಈ ಸಮಸ್ಯೆ ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು: | • ಹೌದು, ನಗರಸ್ಥಳೀಯ ಸಂಸ್ಥೆಗಳಲ್ಲಿ ಮೂಲಭೂತ ಸೌಕರ್ಯದ ಕೊರತೆ, ಸಾರ್ವಜನಿಕರ ಸಹಭಾಗಿತ್ವದ ಕೊರತೆ ಹಾಗೂ ಮಾನವ ಸಂಪನ್ಮೂಲದ ಕೊರತೆಯಿಂದಾಗಿ ನಗರಗಳಲ್ಲಿ ಉತ್ಪಾದನೆಯಾಗುವ ತ್ಯಾಜ್ಯ ವಸ್ತುಗಳನ್ನು ಸಂಸ್ಕರಿಸದೇ ವಿಲೇವಾರಿ ಮಾಡಿದ್ದರಿಂದ ತ್ಯಾಜ್ಯದ ರಾಶಿ ಶೇಖರಣೆಯಾಗಿರುತ್ತದೆ.<br>• ಸದರಿ ಶೇಖರಣೆಯಾಗಿರುವ ಹಳೆಯ ತ್ಯಾಜ್ಯವನ್ನು ಸಂಸ್ಕರಿಸಿ ತೆರವುಗೊಳಿಸಲು (dumpsite remediation), ಕೇಂದ್ರ ಸರ್ಕಾರವು ಜಾರಿಗೆ ತಂದಿರುವ ಮಾರ್ಗಸೂಚಿಗಳನ್ವಯ ಯೋಜನಾ ವರದಿಯನ್ನು ಸಿದ್ದಪಡಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆದು ಕಾಮಗಾರಿಯನ್ನು ಕೈಗೊಳ್ಳಲು ಸೂಚನೆ ನೀಡಲಾಗಿರುತ್ತದೆ. ನಗರಸ್ಥಳೀಯ ಸಂಸ್ಥೆಗಳಲ್ಲಿ ಪ್ರಸ್ತುತ ಉತ್ಪಾದನೆಯಾಗುವ ತ್ಯಾಜ್ಯವನ್ನು ಪೂರ್ಣ ಪ್ರಮಾಣದಲ್ಲಿ ಸಂಸ್ಕರಿಸಿ ಹಳೆಯ ತ್ಯಾಜ್ಯದೊಂದಿಗೆ ಮಿಶ್ರವಾಗದಂತೆ ಖಾತರಿಪಡಿಸಿಕೊಳ್ಳಲು ತಿಳಿಸಲಾಗಿರುತ್ತದೆ.<br>• ಈ ಕುರಿತಾಗಿ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅಧಿಕಾರಿಗಳು, ಪರಿಸರ ಅಭಿಯಂತರರು, ಆರೋಗ್ಯ ನಿರೀಕ್ಷಕರು, ಕಾರ್ಯಪಾಲಕ ಅಭಿಯಂತರರಿಗೆ ರಾಜ್ಯ ಮಟ್ಟದಲ್ಲಿ ಕಾರ್ಯಾಗಾರವನ್ನು (sensitization workshop) ಆಯೋಜಿಸಲಾಗಿರುತ್ತದೆ. ನಗರಗಳಲ್ಲಿ dumpsite remediation ಗಾಗಿ ಯೋಜನಾ ವರದಿಗಳನ್ನು ಸಿದ್ದಪಡಿಸಲು ಅನುವಾಗುವಂತೆ ಮಾರ್ಗಸೂಚಿಗಳು, ಮಾದರಿ ಅಂದಾಜು ಪಟ್ಟಿ, ಟೆಂಡರ್ ದಸ್ತಾವೇಜನ್ನು ನಗರ ಸ್ಥಳೀಯ ಸಂಸ್ಥೆಗಳಿಗೆ ಒದಗಿಸಲಾಗಿರುತ್ತದೆ. |

| | | |
|---|---|---|
| | | • Dumpsite remediation ಯೋಜನಾ ವರದಿಗಳನ್ನು ರಾಜ್ಯ ಮಟ್ಟದಲ್ಲಿ ಪರಿಶೀಲಿಸಲು ರಾಜ್ಯ ಮಟ್ಟದ ತಾಂತ್ರಿಕ ಸಲಹಾ ಸಮಿತಿಯನ್ನು ರಚಿಸಿ ನಿಯಮಿತವಾಗಿ ಸಭೆಗಳನ್ನು ನಡೆಸಿ ನಗರಸ್ಥಳೀಯ ಸಂಸ್ಥೆಗಳ ಯೋಜನಾ ವರದಿಗಳನ್ನು ತಪಾಸಣೆ ಮಾಡಿ ಉನ್ನತಾಧಿಕಾರಯುಕ್ತ ಸಮಿತಿಯ ಅನುಮೋದನೆಗೆ ಶಿಫಾರಸ್ಸು ಮಾಡಲಾಗುತ್ತಿದೆ. |
| ಇ | ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಪ್ಲಾಸ್ಟಿಕ್ ನಿಷೇಧಕ್ಕಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ? | • ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 17 ಇಪಿಸಿ 2012; ದಿನಾಂಕ 11-03-2016 ರನ್ವಯ ರಾಜ್ಯಾದ್ಯಂತ ಹಲವಾರು ಪ್ಲಾಸ್ಟಿಕ್ ಸಾಮಾಗ್ರಿಗಳನ್ನು ನಿಷೇಧಿಸಲಾಗಿದ್ದು, ಏಕ ಬಳಕೆಯ ಪ್ಲಾಸ್ಟಿಕ್ ಸಾಮಾಗ್ರಿಗಳನ್ನು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ, (MoEF&CC) ನವದೆಹಲಿ ರವರು ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ (ತಿದ್ದುಪಡಿ) ನಿಯಮಗಳು, 2021 ರಲ್ಲಿ ಮೇಲಿನ ನಿಷೇಧಿತ ಉತ್ಪನ್ನಗಳ ಜೊತೆಗೆ ಹೆಚ್ಚುವರಿ ಏಕ ಬಳಕೆಯ ಪ್ಲಾಸ್ಟಿಕ್ ಉತ್ಪನ್ನಗಳನ್ನು 1ನೇ ಜುಲೈ 2022 ರಿಂದ ಜಾರಿಗೆ ಬರುವಂತೆ ನಿಷೇಧಿಸಿ ದಿನಾಂಕ: 12ನೇ ಆಗಸ್ಟ್ 2021 ರಂದು ಅಧಿಸೂಚನೆ (G.S.R.No. 571 (ಇ)) ಯನ್ನು ಹೊರಡಿಸಿದೆ. ಸದರಿ ನಿಷೇಧಿತ ಪ್ಲಾಸ್ಟಿಕ್ ಮಾರಾಟ ಮಾಡುವವರ ವಿರುದ್ಧ ದಂಡ ವಿಧಿಸಲು ಕ್ರಮವಹಿಸಿದೆ.<br>• ನಗರ ಸ್ಥಳೀಯ ಸಂಸ್ಥೆಗಳು ಸ್ಥಳೀಯವಾಗಿ ಲಭ್ಯವಿರುವ ಸರ್ಕಾರೇತರ ಸ್ವ-ಸಹಾಯ ಗುಂಪುಗಳ ಮೂಲಕ ಹಾಗೂ ಏಜೆನ್ಸಿಗಳ ಮೂಲಕ ಪ್ಲಾಸ್ಟಿಕ್ ನಿಷೇಧದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕ್ರಮವಹಿಸಿದೆ. ಈ ನಿಟ್ಟಿನಲ್ಲಿ ಬೀದಿ ನಾಟಕ, ಪೋಸ್ಟರ್, ಬ್ಯಾನರ್, ಕಟೌಟ್, ಚಿತ್ರಪತ್ರ, ಶಾಲಾ-ಕಾಲೇಜುಗಳಲ್ಲಿ ಭಾಷಣ ಸ್ಪರ್ಧೆ, ಡ್ರಾಯಿಂಗ್, ಕ್ವಿಜ್ ಸ್ಪರ್ಧೆ, ಸ್ವ-ಸಹಾಯ ಗುಂಪುಗಳಿಗೆ ತಿಳುವಳಿಕೆ ಕಾರ್ಯಕ್ರಮ, ಪ್ರಮುಖ ಬೀದಿಗಳಲ್ಲಿ ಗೋಡೆ ಬರಹ, ಸ್ಥಳೀಯ ಸುದ್ದಿ ವಾಹಿನಿಗಳಲ್ಲಿ ಪ್ರಸಾರ ಕಾರ್ಯಕ್ರಮ, ಧ್ವನಿ ವರ್ಧಕಗಳ ಮೂಲಕ ಪ್ರಚಾರ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. |

ಸಂ: ನಅಇ 208 ಸಿಎಸ್ಎಸ್ 2022

[ಎನ್. ನಾಗರಾಜ (ಎಂಟಿಬಿ)]
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು